(ಆ) ಅನ್ವಯಿಸುವುದಿಲ್ಲ ;

(ಇ) ಅನ್ವಯಿಸುವುದಿಲ್ಲ ;

ಕೈಗಾರಿಕಾ ಕೇಂದ್ರ ಸ್ಥಾಪನೆ

103(234) ಶ್ರೀ ನಾರಾಯಣಸ್ವಾಮಿ ಎಸ್.ಎನ್. (ಬಂಗಾರಪೇಟೆ) :–ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಬಂಗಾರಪೇಟೆ ಕ್ಷೇತ್ರದಲ್ಲಿ ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ಪ್ರಸ್ತಾವನೆ ಇದೆಯೇ ;

(ಆ) ಹಾಗಿದ್ದಲ್ಲಿ, ಎಷ್ಟು ಉದ್ಯಮಿಗಳಿಗೆ ಆರ್ಥಿಕ ಸೌಲಭ್ಯ ನೀಡಿದೆ, ಮೊತ್ತ ಎಷ್ಟು ;

(ಇ) ಮಧ್ಯಮ ಮತ್ತು ಸಣ್ಣ ಕೈಗಾರಿಕೆ ಪ್ರಾರಂಭಿಸಲು ಕೈಗಾರಿಕಾ ಪ್ರಾಂಗಣ ನಿರ್ಮಾಣದ ಉದ್ದೇಶ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಎಷ್ಟು ಎಕರೆ ಭೂಮಿಯನ್ನು ಕಾಯ್ದಿರಿಸಲಾಗಿದೆ ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :–

(ಅ) ಬಂಗಾರಪೇಟೆ ಕ್ಷೇತ್ರದಲ್ಲಿ ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು 2009–14ನೇ ಕೈಗಾರಿಕಾ ನೀತಿ ಪ್ರಕಾರ ಹಲವು ರಿಯಾಯಿತಿ ಹಾಗೂ ಸೌಲಭ್ಯಗಳನ್ನು ನೀಡಿ ಪ್ರೋತ್ಸಾಹಿಸಲಾಗುತ್ತಿದೆ. ಈಗಾಗಲೇ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮವು ಬಂಗಾರಪೇಟೆ ತಾಲ್ಲೂಕಿನ ಕೆಜಿಎಫ್‌ನಲ್ಲಿ 1962ರಲ್ಲಿಯೇ ಕೈಗಾರಿಕಾ ವಸಾಹತುವನ್ನು ಸ್ಥಾಪಿಸಿದೆ. ಆದರೆ, ಸರ್ಕಾರದಿಂದ ನೇರವಾಗಿ ಯಾವುದೇ ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲಾಗುದಿಲ್ಲ. ಇಂತಹ ಪ್ರಸ್ತಾವನೆಗಳು ಸರ್ಕಾರದ ಮುಂದೆ ಇರುವುದಿಲ್ಲ.

ಬಂಗಾರಪೇಟೆ ತಾಲ್ಲೂಕಿನಲ್ಲಿ ಇಲ್ಲಿಯವರೆಗೆ 1,802 ಸಣ್ಣ ಕೈಗಾರಿಕೆಗಳು ನೋಂದಣಿಯಾಗಿದ್ದು, ಅವುಗಳಲ್ಲಿ 11,379 ಜನರಿಗೆ ಉದ್ಯೋಗಾವಕಾಶವನ್ನು

ಕಲ್ಪಿಸಲಾಗಿದೆ. ಸದರಿ ಕೈಗಾರಿಕೆಗಳಿಗೆ ರೂ.7,157.24 ಲಕ್ಷ ಒಟ್ಟು ಬಂಡವಾಳ ಹೂಡಿಕೆಯಾಗಿರುತ್ತದೆ.

(ಆ) ಸರ್ಕಾರವು ಉದ್ಯಮಿಗಳಿಗೆ ಯಾವುದೇ ಆರ್ಥಿಕ ಸೌಲಭ್ಯಗಳನ್ನು ನೀಡುವುದಿಲ್ಲ. ಉದ್ದಿಮೆಗಳನ್ನು ಸ್ಥಾಪಿಸಲು ಮುಂದೆ ಬರುವ ಆಸಕ್ತ ಉದ್ದಿಮೆದಾರರು ಹಣಕಾಸು ಸಂಸ್ಥೆಗಳು ಮತ್ತು ಬ್ಯಾಂಕುಗಳಿಂದ ನೇರವಾಗಿ ಸಾಲ ಸೌಲಭ್ಯ ಪಡೆಯುತ್ತಾರೆ.

ಆದರೆ 2009–14ನೇ ಕೈಗಾರಿಕಾ ನೀತಿಯನ್ವಯ ಸಣ್ಣ ಕೈಗಾರಿಕೆಗಳಿಗೆ ಬಂಡವಾಳ ಹೂಡಿಕೆ ಸಹಾಯಧನ, ಮುದ್ರಾಂಕ ಶುಲ್ಕ ವಿನಾಯಿತಿ, ಬಡ್ಡಿ ಸಹಾಯಧನ, ಪ್ರವೇಶ ತೆರಿಗೆ ವಿನಾಯಿತಿ, ವಿದ್ಯುತ್ ತೆರಿಗೆ ವಿನಾಯಿತಿ, ನೋಂದಣಿ ಶುಲ್ಕ ರಿಯಾಯಿತಿ ಇತ್ಯಾದಿಗಳನ್ನು ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

(ಇ) ಇಲ್ಲ.

(ಈ) ಉದ್ಭವಿಸುವುದಿಲ್ಲ.

ಸಿ.ಎಸ್.ಆರ್.ಹಂಚಿಕೆ

104(240) ಶ್ರೀ ರಾಜೀವ್ ಪಿ. (ಕುಡಚಿ) :–ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಬಳ್ಳಾರಿಯ ಜಿಂದಾಲ್ ಕಂಪನಿಯು ಪಡೆದಿರುವ ಲಾಭದಲ್ಲಿ ಸಿಎಸ್ಆರ್‌ನ್ನು ಯಾವ ಪ್ರಮಾಣದಲ್ಲಿ ಮೂಲಭೂತ ಸೌಕರ್ಯಕ್ಕಾಗಿ ಖರ್ಚು ಮಾಡುತ್ತಿದ್ದಾರೆ;

(ಆ) ಈ ಕಂಪನಿಯ ಸಿಎಸ್ಆರ್‌ನ್ನು ಯಾವ ಪ್ರದೇಶದಲ್ಲಿ ಯಾವ ಯಾವ ಕೆಲಸಕ್ಕಾಗಿ ಬಳಸುತ್ತಿದ್ದಾರೆ ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು):–

(ಅ) ಕಳೆದ ಐದು ವರ್ಷಗಳಲ್ಲಿ ಬಳ್ಳಾರಿ ಜಿಲ್ಲೆಯ ಜಿಂದಾಲ್ ಕಂಪನಿಯು ಸಿಎಸ್ಆರ್ ಚಟುವಟಿಕೆಗಳಿಗೆ ಖರ್ಚು ಮಾಡಿರುವ ಹಣದ ವಿವರಗಳನ್ನು ಈ ಕೆಳಗಿನಂತೆ ನೀಡಿದೆ.